ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಸ್ಮಾರ್ಟ್‌ಸಿಟಿ ಕಂಪನಿಯ ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನ

ಶ್ರೀ ಆರ್. ಪ್ರಸನ್ನ ಕುಮಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

698 (790) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಸ್ಮಾರ್ಟ್‌ಸಿಟಿ ಕಂಪನಿಯ ಯೋಜನೆಯಡಿ ಬಿಡುಗಡೆಯಾದ ಅನುದಾನದಲ್ಲಿ ಯಾರ ಸಲಹೆ ಮೇರೆಗೆ ಕಾಮಗಾರಿ ಕೈಗೊಳ್ಳಲಾಗುತ್ತಿದೆ; ಸ್ಥಳೀಯ ಚುನಾಯಿತ ವಾರ್ಡ್ ಸದಸ್ಯರ ಗಮನಕ್ಕೆ ತರದೆ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆಯೇ; ಈ ಬಗ್ಗೆ ಸ್ಥಳೀಯ ಸಂಸ್ಥೆಯ ಜೊತೆ ಚರ್ಚಿಸಲಾಗಿದೆಯೇ; (ವಿವರ ನೀಡುವುದು)

(ಆ) ಸ್ಮಾರ್ಟ್‌ಸಿಟಿ ಕಂಪನಿಯ ಆಡಳಿತ ವ್ಯವಸ್ಥೆಗೆ ಒಂದು ಕಂಪನಿಗೆ ತಿಂಗಳೊಂದಕ್ಕೆ ತಗಲುವ ವೆಚ್ಚವೆಷ್ಟು; (ವಿವರ ನೀಡುವುದು)

(ಇ) ಸ್ಮಾರ್ಟ್‌ಸಿಟಿಯಲ್ಲಿ ಕೈಗೊಳ್ಳುವ ಕಾಮಗಾರಿಗೂ ಮತ್ತು ಸ್ಥಳೀಯ ಆಡಳಿತ ಸಂಸ್ಥೆಗೂ ಸಂಬಂಧ ಇಲ್ಲವೆಂಬ ದೂರುಗಳಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?